# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ: 09ನೇ ಫೆಬ್ರವರಿ, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಭಾಪತಿ ಸ್ಥಾನಕ್ಕೆ ಚುನಾವಣೆ

01. **ಶ್ರೀ ಕೆ.ವಿ.ನಾರಾಯಣಸ್ವಾಮಿ ಅವರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಕೆ.ಟಿ.ಶ್ರೀಕಂಠೇಗೌಡ** ಅವರು ಪ್ರಸ್ತಾವವನ್ನು ಅನುಮೋದಿಸುವುದು.

02. **ಶ್ರೀ ಎನ್.ಅಪ್ಪಾಜಿಗೌಡ ಅವರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಪ್ರಸ್ತಾವವನ್ನು ಅನುಮೋದಿಸುವುದು.

03. **ಶ್ರೀ ಎಂ.ನಾರಾಯಣಸ್ವಾಮಿ ಅವರು ಶ್ರೀ ನಸೀರ್ ಅಹಮದ್** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಆರ್.ಪ್ರಸನ್ನ ಕುಮಾರ್** ಅವರು ಪ್ರಸ್ತಾವವನ್ನು ಅನುಮೋದಿಸುವುದು.

04. **ಶ್ರೀ ಬಿ.ಕೆ.ಹರಿಪ್ರಸಾದ್ ಅವರು ಶ್ರೀ ನಸೀರ್ ಅಹಮದ್** ಅವರನ್ನು ವಿಧಾನ ಪರಿಷತ್ತಿನ ಸಭಾಪತಿಯವರನ್ನಾಗಿ ಚುನಾಯಿಸಬೇಕೆಂದು ಸೂಚಿಸುವುದು.

    **ಶ್ರೀ ಅರವಿಂದ ಕುಮಾರ್ ಅರಳಿ** ಅವರು ಪ್ರಸ್ತಾವವನ್ನು ಅನುಮೋದಿಸುವುದು.

### 02. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2021ನೇ ಜನವರಿ, 28ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:29.01.2021ರಂದು **ಶ್ರೀ ಆಯನೂರು ಮಂಜುನಾಥ್** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

...2/-

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಪುಟ್ಟಣ್ಣ, ಮರಿತಿಬ್ಬೇಗೌಡ ಮತ್ತು ಕೆ.ಟಿ. ಶ್ರೀಕಂಠೇಗೌಡ** ಅವರುಗಳು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 7ನೇ ಎ.ಐ.ಸಿ.ಟಿ.ಇ. ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ನೀಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರು, ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ಕೆ. ಹರೀಶ್ ಕುಮಾರ್** ಅವರು ನ್ಯಾಯಾಲಯದ ಆದೇಶದಂತೆ ಮ್ಯೂಟೇಶನ್ ಮಾಡಿ ಪಹಣಿಯಲ್ಲಿ ಸೂಕ್ತ ಬದಲಾವಣೆ ಮಾಡಲು ಸರಳೀಕೃತ ವ್ಯವಸ್ಥೆ ಜಾರಿಗೆ ತರುವುದರ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀಮತಿ ಭಾರತಿ ಶೆಟ್ಟಿ** ಅವರು ರಾಜ್ಯದ ವಿವಿಧ ಇಲಾಖೆಗಳಿಗೆ ಅಗತ್ಯವಿರುವ ಬಟ್ಟೆಗಳನ್ನು ಜವಳಿ ಮತ್ತು ಕೈಮಗ್ಗ ನಿಗಮದಿಂದ ಖರೀದಿಸುವ ಮೂಲಕ ನೇಕಾರರಿಗೆ ರಕ್ಷಣೆ ನೀಡುವ ಕುರಿತು ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎನ್.ರವಿಕುಮಾರ್** ಅವರು 2020-21ನೇ ಸಾಲಿನಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಸಮರ್ಪಕವಾಗಿ ಪರಿಶೀಲಿಸದೆ ಅನುಮತಿ ನೀಡಿರುವ ಕುರಿತು ತನಿಖೆ ನಡೆಸುವ ಸಂಬಂಧ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

05. **ಶ್ರೀ ಕೆ.ಟಿ.ಶ್ರೀಕಂಠೇಗೌಡ ಹಾಗೂ ಶ್ರೀ ಯು.ಬಿ.ವೆಂಕಟೇಶ್** ಅವರು ರಾಷ್ಟ್ರೀಯ ಹೆದ್ದಾರಿ ನಂ.4ರಲ್ಲಿನ ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯು ಏಕಪಥ ರಸ್ತೆಯಾಗಿರುವುದರಿಂದ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿರುವ ಕಾರಣ ಸದರಿ ಬೈಪಾಸ್ ರಸ್ತೆಯನ್ನು ಆರು ಪಥದ ರಸ್ತೆಯನ್ನಾಗಿ ನಿರ್ಮಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

06. **ಶ್ರೀ ಗೋವಿಂದರಾಜು** ಅವರು 2018-19ನೇ ಸಾಲಿನಲ್ಲಿ ಕಾಲೋನಿ ಅಭಿವೃದ್ಧಿ ಯೋಜನೆಯಡಿ ಕಲಬುರಗಿ ನಗರ, ಕೊರಟಗೆರೆ, ತುಮಕೂರು, ಮದ್ದೂರು ಹಾಗೂ ಕೋಲಾರ ವಿಧಾನಸಭಾ ಕ್ಷೇತ್ರಗಳ ವ್ಯಾಪಿಯಲ್ಲಿ ಬರುವ ಕಾಲೋನಿಗಳ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವನ್ನು ಪ್ರಸಕ್ತ ಆರ್ಥಿಕ ವರ್ಷದ ಅಂತ್ಯದೊಳಗೆ ಸಮರ್ಪಕವಾಗಿ ಬಳಸುವ ಸಂಬಂಧ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಕೆ.ಟಿ. ಶ್ರೀಕಂಠೇಗೌಡ, ಪುಟ್ಟಣ್ಣ ಮತ್ತು ಎಸ್.ವ್ಹಿ. ಸಂಕನೂರ** ಅವರುಗಳು ದಿನಾಂಕ:10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ 8/2020ನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೨. **ಶ್ರೀ ಕೆ.ಸಿ. ಕೊಂಡಯ್ಯ** ಅವರು ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನ ಹಾಗೂ ಅದರ ಬಳಕೆ ಕುರಿತು ಪ್ರಸ್ತಾಪಿಸುವುದು.

೦೩. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಜಿಲ್ಲೆಯ ಕೆರೆಗಳಿಗೆ ಸಂಸ್ಕರಿಸಿದ ನೀರನ್ನು ತುಂಬಿಸಲು ರೂಪಿಸಿರುವ ಕೆ.ಸಿ.ವ್ಯಾಲಿ ಯೋಜನೆಯಡಿಯಲ್ಲಿ ನೂರಾರು ಕೋಟಿ ರೂಗಳನ್ನು ವೆಚ್ಚ ಮಾಡಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಕೆರೆಗಳಿಗೆ ನೀರನ್ನು ತುಂಬಿಸಲು ಆಗದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದ ಖಾನಾಪುರ ತಾಲ್ಲೂಕಿನ ನೇರಸೆ, ಶಿರೊಳಿ ಹಾಗೂ ಇತರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಜನರು ಮೂಲಭೂತ ಸೌಲಭ್ಯಗಳಿಲ್ಲದೆ ಶೋಚನೀಯ ಸ್ಥಿತಿ ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.

೦೫. **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರು ರಾಜ್ಯದ MSME ಕಲ್ಲು ಗಣಿಗಾರಿಕೆಗಳಿಗೆ 2020 ಮಾರ್ಚ್‌ನಲ್ಲಿ ತಿದ್ದುಪಡಿ ತಂದ ನಂತರ ಹಳೆಯ ಅರ್ಜಿಗಳಿಗೆ ತಹಶೀಲ್ದಾರ್, ಅಸಿಸ್ಟೆಂಟ್ ಕಮೀಷನರ್, ಜಿಲ್ಲಾಧಿಕಾರಿಗಳು, ಅರಣ್ಯ ಇಲಾಖೆಯವರು ನಿರಾಕ್ಷೇಪಣಾ ಪ್ರಮಾಣಪತ್ರ ನೀಡಿ, ಟಾಸ್ಕಫೋರ್ಸ್ ಸಮಿತಿ ಒಪ್ಪಿಗೆ ನೀಡಿದ ಮನವಿಗಳಿಗೆ ಪರವಾನಗಿ ನೀಡದೆ ಇರುವುದರಿಂದ, ಬಾಕಿ ಪರವಾನಗಿ ಕೋರಿರುವ MSME ಕಲ್ಲು ಗಣಿಗಾರಿಕೆ, ಕಲ್ಲು ಗಣಿ ಕ್ರಷರ್‌ಗಳವರಿಗೆ ತೊಂದರೆಯುಂಟಾಗಿರುವುದಲ್ಲದೆ ಹೊರರಾಜ್ಯಗಳಿಂದ ಕಲ್ಲುಪುಡಿ ಸರಬರಾಜಾಗುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂ ರಾಜಧನ ನಷ್ಟವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

| ಶ್ರೀಯುತರುಗಳಾದ: | |
|---|---|
| ಎಸ್.ಆರ್.ಪಾಟೀಲ್ ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು. | ನ್ಯಾಯಮೂರ್ತಿಗಳಾದ ನಾಗಮೋಹನ ದಾಸ್ ಸಮಿತಿಯು ನೀಡಿರುವ ಶಿಫಾರಸ್ಸಿನ ರೀತ್ಯಾ ರಾಜ್ಯದಲ್ಲಿ ಪರಿಶಿಷ್ಟ ಪಂಗಡಕ್ಕೆ ಶೇ.7.5% ಮೀಸಲಾತಿ ಕಲ್ಪಿಸಲು ಹಾಗೂ ಪಂಚಮಸಾಲಿ ಸಮುದಾಯವನ್ನು 2ಎಗೆ ಸೇರಿಸುವ ಮತ್ತು ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಆಯಾ ಸಮಾಜದ ಮುಖಂಡರುಗಳು ಪಾದಯಾತ್ರೆ ಕೈಗೊಂಡು ಹೋರಾಟ ನಡೆಸುತ್ತಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**